ಮಂಡನೆಗೆ ಅನುಮತಿ ಕೋರಿಕೆ

ಶ್ರೀ. ಎ. ಲಕ್ಷ್ಮೀಸಾಗರ್ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು ಮಾನ್ಯ ಮುಖ್ಯ ಮಂತ್ರಿಗಳ ಪರವಾಗಿ).— ಮಾನ್ಯ ಅಧ್ಯಕ್ಷರೆ,

"೧೯೮೭ನೇ ಇಸವಿಯ ಕರ್ನಾಟಕ ಸ್ಟ್ಯಾಂಪ್ಸ್ (ಎರಡನೇ ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿಯನ್ನು ಕೋರುತ್ತೇನೆ."

ಅಧ್ಯಕ್ಷರು.— ಪ್ರಸ್ತಾವ ಏನೆಂದರೆ.—

"೧೯೮೭ನೇ ಇಸವಿಯ ಕರ್ನಾಟಕ ಸ್ಟ್ಯಾಂಪ್ಸ್ (ಎರಡನೇ ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿಯನ್ನು ನೀಡುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಂಡನೆಗೆ
ಅನುಮತಿ ನೀಡಲಾಯಿತು.

ಶ್ರೀ. ಎ. ಲಕ್ಷ್ಮೀಸಾಗರ್.— ೧೯೮೭ನೇ ಕರ್ನಾಟಕ ಸ್ಟ್ಯಾಂಪ್ಸ್ (ಎರಡನೇ ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು.— ವಿಧೇಯಕವನ್ನು ಮಂಡಿಸಲಾಗಿದೆ.

೧೯೮೭ನೇ ಇಸವಿಯ ಕರ್ನಾಟಕ ಮೋಟಾರು ವಾಹನಗಳ ತೆರಿಗೆ (ತಿದ್ದುಪಡಿ) ವಿಧೇಯಕ

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ವೀರಣ್ಣ (ಸಾರಿಗೆ, ಸಣ್ಣ ಉಳಿತಾಯ ಮತ್ತು ಬಂದೀಖಾನೆ ರಾಜ್ಯಮಂತ್ರಿಗಳು).—ಮಾನ್ಯ ಅಧ್ಯಕ್ಷರೆ,

"೧೯೮೭ನೇ ಇಸವಿಯ ಕರ್ನಾಟಕ ಮೋಟಾರು ವಾಹನಗಳ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ತಮ್ಮ ಮುಂದೆ ಮಂಡಿಸಲು ಅನುಮತಿಯನ್ನು ಕೋರುತ್ತೇನೆ."

ಅಧ್ಯಕ್ಷರು.— ಪ್ರಸ್ತಾವ ಏನೆಂದರೆ.—

"೧೯೮೭ನೇ ಇಸವಿಯ ಕರ್ನಾಟಕ ಮೋಟಾರು ವಾಹನಗಳ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು.

ಪ್ರಸ್ತಾವ ಅಂಗೀಕರಿಸಲಾಯಿತು ಮತ್ತು ಮಂಡನೆಗೆ
ಅನುಮತಿ ನೀಡಲಾಯಿತು

ಶ್ರೀ ವೀರಣ್ಣ.— ೧೯೮೭ನೇ ಇಸವಿಯ ಕರ್ನಾಟಕ ಮೋಟಾರು ವಾಹನಗಳ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು.— ವಿಧೇಯಕವನ್ನು ಮಂಡಿಸಲಾಗಿದೆ.

೧೯೮೭ ನೇ ಇಸವಿಯ ಕರ್ನಾಟಕ ಧನವಿನಿಯೋಗ ವಿಧೇಯಕ ಪರ್ಯಾಲೋಪನಾ ಪ್ರಸ್ತಾವ

ಶ್ರೀ ಎ. ಲಕ್ಷ್ಮೀಸಾಗರ್ (ಮಾನ್ಯ ಕಾನೂನು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು. ಮಾನ್ಯ ಮುಖ್ಯ ಮಂತ್ರಿಗಳ ಪರವಾಗಿ).—ಮಾನ್ಯ ಅಧ್ಯಕ್ಷರೆ,

"೧೯೮೭ನೇ ಇಸವಿಯ ಧನವಿನಿಯೋಗ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ."

ಪ್ರಸ್ತಾವವನ್ನು ಮಂಡಿಸಲಾಯಿತು.